(೭)

**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1387 (1492) |
| ಸದಸ್ಯರ ಹೆಸರು | : | ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 17.03.2026 |
| ಉತ್ತರಿಸಬೇಕಾದವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ನಗರ ಯೋಜನೆ ಮತ್ತು ಗ್ರಾಮಾಂತರ ಯೋಜನೆಯ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ಸಂಖ್ಯೆ ಎಷ್ಟು;</td><td>ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳ ವಿವರಗಳು ಈ ಕೆಳಕಂಡಂತಿವೆ.<br><br>
<table>
<tr><th>ವೃಂದ</th><th>ಖಾಲಿ ಹುದ್ದೆಗಳ ಸಂಖ್ಯೆ</th></tr>
<tr><td>ಗ್ರೂಪ್-ಎ</td><td>65</td></tr>
<tr><td>ಗ್ರೂಪ್-ಬಿ</td><td>69</td></tr>
<tr><td>ಗ್ರೂಪ್-ಸಿ</td><td>249</td></tr>
<tr><td>ಗ್ರೂಪ್-ಡಿ</td><td>70</td></tr>
<tr><td>ಒಟ್ಟು</td><td>453</td></tr>
</table></td></tr>
<tr><td>ಆ)</td><td>ಈ ಹುದ್ದೆಗಳು ಎಷ್ಟು ವರ್ಷಗಳಿಂದ ಖಾಲಿ ಇರುತ್ತವೆ; ಇವುಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;</td><td>ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ 2022ರ ನಂತರ ಹೊಸ ಹುದ್ದೆಗಳ ಸೃಜನೆ, ಅಧಿಕಾರಿ / ನೌಕರರ ಮುಂಬಡ್ತಿ ಮತ್ತು ನಿವೃತ್ತಿ ಮುಂತಾದ ಕಾರಣಗಳಿಂದ ಮೇಲ್ಕಂಡ ಹುದ್ದೆಗಳು ಖಾಲಿ ಇರುತ್ತವೆ.<br><br>ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.<br><br>
<table>
<tr><th>ಹುದ್ದೆಯ ಹೆಸರು</th><th>ಅನುಮೋದನೆ ನೀಡಿರುವ ಹುದ್ದೆಗಳ ಸಂಖ್ಯೆ</th></tr>
<tr><td>ಸಹಾಯಕ ನಿರ್ದೇಶಕರು ಗ್ರೂಪ್-'ಎ'</td><td>05</td></tr>
<tr><td>ನಗರ ಯೋಜಕರು ಗ್ರೂಪ್-'ಬಿ'</td><td>10</td></tr>
<tr><td>ಸಹಾಯಕ ನಗರ ಯೋಜಕರು ಗ್ರೂಪ್-'ಸಿ'</td><td>40</td></tr>
<tr><td>ಒಟ್ಟು</td><td>55</td></tr>
</table><br>ಅದರಂತೆ, ಸಹಾಯಕ ನಿರ್ದೇಶಕರ 05+02 (ಹೈ.ಕ)= 07 ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಕೆ.ಪಿ.ಎಸ್.ಸಿ.ಗೆ ಆನ್‌ಲೈನ್ ಮೂಲಕ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ ಹಾಗೂ ನಗರ ಯೋಜಕರ 10+03 (ಬ್ಯಾ.ಲಾ) + 03 (ಹೈ.ಕ)=16 ಹುದ್ದೆಗಳನ್ನು ಮತ್ತು ಸಹಾಯಕ ನಗರ ಯೋಜಕರ 40+06 (ಹೈ.ಕ) =46 ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು</td></tr>
</table>

ಆನ್‌ಲೈನ್ ಮೂಲಕ ಕೆ.ಪಿ.ಎಸ್.ಸಿ.ಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು.

ಕೆ.ಪಿ.ಎಸ್.ಸಿ. ರವರ ಪತ್ರ ದಿನಾಂಕ 27.11.2024 ರಲ್ಲಿ ಸದರಿ ಹುದ್ದೆಗಳಿಗೆ ಪರಿಶಿಷ್ಟ ಜಾತಿಯ ಒಳ ಮೀಸಲಾತಿಯನ್ನು ಜಾರಿಗೊಳಿಸಿದ ನಂತರ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಲಾಗಿರುತ್ತದೆ.

ಪರಿಶಿಷ್ಟ ಜಾತಿ ಮತ್ತು ಪಂಗಡಗಳಿಗೆ ಹೆಚ್ಚಿಸಲಾದ ಮೀಸಲಾತಿ ಪ್ರಮಾಣವನ್ನು ಪ್ರಶ್ನಿಸಿ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ನೀಡಿರುವ ಮಧ್ಯಂತರ ಆದೇಶದ ಹಿನ್ನಲೆಯಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಲು ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಸರ್ಕಾರವು ಇತ್ತೀಚಿಗೆ ಹೊರಡಿಸಿರುವ ಆದೇಶ ಸಂ: ಸಿಆಸುಇ 01 ಸೆಹಿಮ 2026, ದಿನಾಂಕ 27.02.2026 ರಲ್ಲಿ ನೀಡಿರುವ ಸೂಚನೆಗಳನ್ವಯ ಮೇಲ್ಕಂಡ ಹುದ್ದೆಗಳನ್ನು ದಿನಾಂಕ 28.12.2022ರ ಪೂರ್ವದಲ್ಲಿ ಜಾರಿಯಲ್ಲಿದ್ದ ಮೀಸಲಾತಿಯನ್ನು ಅನುಸರಿಸಿ, ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಕೆ.ಪಿ.ಎಸ್.ಸಿ.ಗೆ ಪ್ರಸ್ತಾವನೆ ಸಲ್ಲಿಸಲು ಕ್ರಮ ವಹಿಸಲಾಗುತ್ತಿದೆ.

ಉಳಿದಂತೆ, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಿಕೊಳ್ಳಲು ಇ-ಕಚೇರಿ ಕಡತ ಸಂಖ್ಯೆ: ನಆಇ 299 ನಯೋಸೇ 2025 ರಲ್ಲಿ ಕ್ರಮವಹಿಸಿ ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ.

| **ಹುದ್ದೆಯ ಹೆಸರು** | **ಹುದ್ದೆಗಳ ಸಂಖ್ಯೆ** |
|---|---|
| ಸಹಾಯಕ ನಿರ್ದೇಶಕರು ಗ್ರೂಪ್-'ಎ' | 28+02(ಹೈ.ಕ)=30 |
| ನಗರ ಯೋಜಕರು ಗ್ರೂಪ್-'ಬಿ' | 35+01(ಹೈ.ಕ)=36 |
| ಸಹಾಯಕ ನಗರ ಯೋಜಕರು ಗ್ರೂಪ್-'ಸಿ' | 90+05(ಹೈ.ಕ)=95 |
| ಪ್ರ.ದ.ಸಹಾಯಕರು ಗ್ರೂಪ್-'ಸಿ' | 03 |
| ದ್ವಿ.ದ.ಸಹಾಯಕರು ಗ್ರೂಪ್-'ಸಿ' | 08 |
| **ಒಟ್ಟು** | **172** |

ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ಮುಂಬಡ್ತಿ ಕೋಟಾದಡಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳನ್ನು ಕಾಲ-ಕಾಲಕ್ಕೆ ಮುಂಬಡ್ತಿ ಮೂಲಕ ಭರ್ತಿ ಮಾಡಲಾಗುತ್ತಿದೆ.

ಗ್ರೂಪ್-ಸಿ ವೃಂದದ ಬೆರಳಚ್ಚುಗಾರರ 36 ಮತ್ತು ವಾಹನ ಚಾಲಕರ 06 ಹುದ್ದೆಗಳನ್ನು ಹಾಗೂ ಗ್ರೂಪ್-ಡಿ ವೃಂದದ 70 ಹುದ್ದೆಗಳ ಸೇವೆಯನ್ನು ಸರ್ಕಾರದ ಮಾರ್ಗಸೂಚಿಗಳನ್ವಯ ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲಾಗುತ್ತಿದೆ.

| | | |
|---|---|---|
| ಇ) | ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದೇ ಇದ್ದಲ್ಲಿ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕಷ್ಟವಾಗುವುದಿಲ್ಲವೇ; | ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ / ಸಿಬ್ಬಂದಿಗಳ ಸೇವೆಯನ್ನು ಉಪಯೋಗಿಸಿಕೊಂಡು, ಇಲಾಖೆಯ ಕೆಲಸ ಕಾರ್ಯಗಳನ್ನು ನಿರ್ವಹಿಸಲಾಗುತ್ತಿದೆ. |
| ಈ) | ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿದ್ದಲ್ಲಿ ನಿರೋದ್ಯೋಗಿಗಳ ಸಂಖ್ಯೆ ಕಡಿಮೆ ಆಗುವುದಿಲ್ಲವೇ; ಈ ಬಗ್ಗೆ ಸರ್ಕಾರದ ನಿಲುವೇನು? | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಹೆಚ್ಚಿಸಲಾದ ಮೀಸಲಾತಿ ಪ್ರಮಾಣವನ್ನು ಪ್ರಶ್ನಿಸಿ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣಗಳು ದಾಖಲಾಗಿರುವ ಹಿನ್ನೆಲೆಯಲ್ಲಿ ಹಾಗೂ ಪರಿಶಿಷ್ಟ ಜಾತಿಗೆ ಒಳ ಮೀಸಲಾತಿಯನ್ನು ನಿಗದಿಪಡಿಸುವ ಕಾರಣಗಳಿಂದ ನೇರ ನೇಮಕಾತಿ ಪ್ರಕ್ರಿಯೆಗಳಲ್ಲಿ ವಿಳಂಬ ಉಂಟಾಗಿದ್ದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಆದೇಶ ದಿನಾಂಕ 27.02.2026ರ ಸೂಚನೆಗಳನ್ವಯ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ಶೀಘ್ರವಾಗಿ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ. |

ನಅಇ 49 ನಯೋಸೇ 2026(ಇ)

(ಬಿ.ಎಸ್. ಸುರೇಶ)
ನಗರಾಭಿವೃದ್ಧಿ ಮತ್ತು ನಗರ
ಯೋಜನೆ ಸಚಿವರು